**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ/04/ಇಎಸ್‌ಟಿ 2(ಬಿ)/2015 / 2266

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560001.
ದಿನಾಂಕ: 18.07.2017.

## ಕಾರಣ ಕೇಳುವ ನೋಟೀಸು

*****

ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: ಡಿಟಿಇ 201 ಇಎಸ್‌ಟಿ (7) 2016, ದಿನಾಂಕ:21.02.2017 ಮತ್ತು ದಿನಾಂಕ:22.05.2017ರಲ್ಲಿ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ/ ಅನುದಾನಿತ ಪಾಲಿಟೆಕ್ನಿಕ್/ ಇಂಜನಿಯರಿಂಗ್/ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸೇವಾ ವಿಷಯಗಳು, ವೈಯಕ್ತಿಕ ಮತ್ತು ಇನ್ನಿತರೇ ಮನವಿಗಳನ್ನು ಸಂಬಂಧಪಟ್ಟ ಸಂಸ್ಥೆಗಳ ಪ್ರಾಂಶುಪಾಲರು ಕೂಲಂಕುಷವಾಗಿ ಪರಿಶೀಲಿಸಿ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಸ್ಪಷ್ಟ ಅಭಿಪ್ರಾಯ/ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಆದಾಗ್ಯೂ ತಮ್ಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಬೇರೊಂದು ಇಲಾಖೆಯಲ್ಲಿ ಅರ್ಜಿ ಆಹ್ವಾನಿಸಲಾಗಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪ್ರಮಾಣ ಪತ್ರದ ನೀಡುವಂತೆ ಕೋರಿರುವ ಮನವಿಗಳನ್ನು ಸಂಬಂಧಪಟ್ಟ ಸಂಸ್ಥೆಯ ಪ್ರಾಚಾರ್ಯರು ಪರಿಶೀಲಿಸಿ ಸೂಕ್ತ ಶಿಫಾರಸ್ಸಿನೊಂದಿಗೆ ಸಮುಚಿತ ಮಾರ್ಗದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸದೆ, ಸರ್ಕಾರದ/ ನಿರ್ದೇಶನಾಲಯದ ಆದೇಶ/ ಸೂಚನೆಗಳನ್ನು ಪಾಲಿಸದೆ ಹಿಂಬರಹಗಳನ್ನು ನೀಡುವ ಮೂಲಕ ಕರ್ನಾಟಕ ಸರ್ಕಾರಿ ನೌಕರರ ನಡತೆ (ವರ್ತನೆ) ನಿಯಮಗಳು, 1966 ನಿಯಮ 3(i)(ii)(iii) ನಿಯಮಗಳನ್ನು ಉಲ್ಲಂಘನೆ ಮಾಡಿರುವುದು ಕಂಡು ಬಂದಿರುತ್ತದೆ. ಈ ಸಂಬಂಧವಾಗಿ ನೋಟೀಸ್ ತಲುಪಿದ 07 ದಿನಗೊಳಗಾಗಿ ನಿರ್ದೇಶನಾಲಯಕ್ಕೆ ಸೂಕ್ತ ಸಮಜಾಯಿಷಿಯನ್ನು ಸಲ್ಲಿಸತಕ್ಕದ್ದು, ಇಲ್ಲವಾದಲ್ಲಿ ನಿಮ್ಮ ಹೇಳಿಕೆ ಏನು ಇಲ್ಲವೆಂದು ಪರಿಗಣಿಸಿ ಏಕಪಕ್ಷೀಯವಾಗಿ ನಿಮ್ಮ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದೆಂದು ಸೂಚಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ

ಇವರಿಗೆ:

1. ಪ್ರಾಚಾರ್ಯರು ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಕಲಬುರಗಿ.
2. ಪ್ರಾಚಾರ್ಯರು ಸರ್ಕಾರಿ ಸಿ.ಪಿ.ಸಿ ಪಾಲಿಟೆಕ್ನಿಕ್, ಮೈಸೂರು.

ಪ್ರತಿ:

1. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಕಛೇರಿ ಪ್ರತಿ.